# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 315 | Pages. 2 | Date: 11-11-2025, TUESDAY | RNI NO: KARKAN/2024/89601 | Kannada Daily

ಸಂಪುಟ : 01 – ಸಂಚಿಕೆ : 315 – ಪುಟಗಳು : 2 11-11-2025 ಮಂಗಳವಾರ | Ph: 8762954248 | ದರ : ₹1


# ಬೇಲೂರಿನಲ್ಲಿ ಶಾಸಕ VS ಕಾಂಗ್ರೆಸ್ ಸದಸ್ಯರು

## ಕೆಡಿಪಿ ಸಭೆಯಲ್ಲಿ ತಾರಕಕ್ಕೇರಿದ ವಾಕ್ಸಮರ | ಮಾಜಿ ಸಚಿವ ಬಿ.ಶಿವರಾಂ ವಿರುದ್ಧ ವಾಗ್ದಾಳಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಬೇಲೂರಿನಲ್ಲಿ ಶಾಸಕ ಹೆಚ್.ಕೆ.ಸುರೇಶ್ ಹಾಗೂ ಮಾಜಿ ಸಚಿವ ಬಿ.ಶಿವರಾಂ ನಡುವೆ ಮುಸುಕಿನ ಗುದ್ದಾಟ ಮುಂದುವರಿದಿದ್ದು ಸೋಮವಾರ ನಡೆದ ತಾಲ್ಲೂಕು ಮಟ್ಟದ ಕೆಡಿಪಿ ಸಭೆಯಲ್ಲಿ ಶಾಸಕರು ಮತ್ತು ಕಾಂಗ್ರೆಸ್ ಸದಸ್ಯರ ನಡುವೆ ವಾಗ್ವಾದ ಜೋರಾಗಿತ್ತು.




ಕ್ಷೇತ್ರದ ರೈತರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಸಚಿವರು, ಅಧಿಕಾರಿಗಳನ್ನು ಗೋಗರೆದು ಅನುದಾನ ತಂದರೆ ಇಲ್ಲೊಬ್ಬರು ಸುಳ್ಳು ಹೇಳುತ್ತಾ ಜನರನ್ನು ತಪ್ಪು ದಾರಿಗೆ ಎಳೆಯುತ್ತಿದ್ದಾರೆಂದು ಶಾಸಕ ಹೆಚ್.ಕೆ.ಸುರೇಶ್ ಅವರು ಮಾಜಿ ಸಚಿವ ಬಿ.ಶಿವರಾಂ ವಿರುದ್ಧ ಗುಡುಗಿದರು.

ಶಾಸಕರ ಮಾತಿಗೆ ವಿರೋಧ ವ್ಯಕ್ತಪಡಿಸಿದ ನಾಮನಿರ್ದೇಶಿತ ಸದಸ್ಯರು ವಾಗ್ದಾಳಿ ನಡೆಸಿದರು. ಮಾತಿನ ಚಕಮಕಿಯಿಂದ ಸಭೆ ಗೊಂದಲದ ಗೂಡಾಗಿ ಮಾರ್ಪಟ್ಟಿತು. ತಾಲ್ಲೂಕಿನ ಹನಿಕೆ, ಕೋಳಗುಂದ, ಬಿಕ್ಕೋಡು, ತಟ್ಟೆಹಳ್ಳಿ ಸೇರಿ ವಿವಿಧ ಭಾಗಗಳಿಗೆ 220 ಕೆವಿ ಸಾಮರ್ಥ್ಯದ ಸಬ್ ಸ್ಟೇಷನ್ ಗಳನ್ನು ಮುಖ್ಯಮಂತ್ರಿ, ಇಂಧನ ಸಚಿವರ ಬಳಿ ಪದೇ ಪದೇ ಅಲೆದು ಮಂಜೂರು ಮಾಡಿಸಿದ್ದೇನೆ. ಅದರಿಂದ ಗ್ರಾಮದ ರೈತರು ಹಾಗೂ ವಿದ್ಯಾರ್ಥಿಗಳಿಗೆ ಭಾರೀ ಅನುಕೂಲವಾಗಿದೆ. ಸದನದಲ್ಲೂ ಸಾಕಷ್ಟು ಸಲ ಈ ವಿಚಾರ ಪ್ರಸ್ತಾಪಿಸಿದ್ದೇನೆ. ಕ್ಷೇತ್ರದ ಜನರ ಒಳಿತಿಗಾಗಿ ನಾನು ಕೆಲಸ ಮಾಡುತ್ತಿದ್ದರೆ ಇಲ್ಲೊಬ್ಬರು ಸಾರ್ವಜನಿಕರ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಅನುದಾನ ತಂದಿರುವವರು ಯಾರು, ಅಧಿಕಾರಿಗಳನ್ನು ನೇರವಾಗಿ ಸಂಪರ್ಕಿಸಿ ಸಚಿವರಿಂದ ಅವರಿಗೆ ಅನುಮೋದನೆ ಕೊಡಿಸಿರುವವರು ಯಾರು ಎಂದು ಸತ್ಯ ಗೊತ್ತಾಗಬೇಕು. ಸುಳ್ಳು ಮಾಹಿತಿ ನೀಡಿ ದಿಕ್ಕು ತಪ್ಪಿಸುತ್ತಿರುವವರ ಬಗ್ಗೆ ಮಾಹಿತಿ ನೀಡಬೇಕು ಎಂದರು.

ಶಾಸಕರ ಈ ಮಾತಿಗೆ ಕೆಂಡಾಮಂಡಲರಾದ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಆನಂದ್, ಕೆಡಿಪಿ ಸದಸ್ಯರಾದ ಚೇತನ್, ನಂದೀಶ್, ಜ್ಯೋತಿ, ನವೀನ್, ಪರಮೇಶ್, ಸುಹೀಲ್ ಪಾಷ ಅವರು, 40 ವರ್ಷಗಳ ರಾಜಕೀಯವನ್ನೇ ಉಸಿರಾಡುತ್ತಿರುವ ಬಿ. ಶಿವರಾಂ ಅವರ ಕುರಿತು ಹಗುರವಾಗಿ ಮಾತನಾಡುವುದು ತರವಲ್ಲ. ಇತ್ತೀಚಿನ ದಿನಗಳಲ್ಲಿ ಕ್ಷೇತ್ರದಲ್ಲಿ ವ್ಯಾಪಕ ಭ್ರಷ್ಟಾಚಾರ ಮತ್ತು ಅಧಿಕಾರಿಗಳನ್ನು ಹೆದರಿಸುವ ಕೆಲಸ ನಡೆಯುತ್ತಿದೆ. ಶಾಸಕರ ಹಿಂಬಾಲಕರು ಸರ್ವಾಧಿಕಾರಿಗಳಂತೆ ವರ್ತಿಸುತ್ತಿದ್ದಾರೆ. ಕಳಪೆ ಕಾಮಗಾರಿ ವಿಪರೀತವಾಗಿವೆ ಎಂದರು.

ಮಹಾತ್ಮ ಗಾಂಧೀಜಿ ಅವರನ್ನು ಹತ್ಯೆಗೈದ ಗೋಡ್ಸೆಯನ್ನು ಪೂಜಿಸುವ ನಿಮ್ಮಿಂದ ನಾವು ಸಂಸ್ಕೃತಿ ಕಲಿಯುವ ಅವಶ್ಯಕತೆಯಿಲ್ಲವೆಂದು ಗುಡುಗಿದರು.

ಅದಕ್ಕೆ ಕೆರಳಿದ ಶಾಸಕ ಸುರೇಶ್ ಅವರು, ಇಡೀ ರಾಜ್ಯ ಹಾಗು ತಾಲೂಕಿಗೆ ನಿಮ್ಮ ನಾಯಕರ ಸಾಧನೆ ಏನೆಂಬುದು ಗೊತ್ತಿದೆ. ವರ್ಗಾವಣೆ ದಂಧೆಯಿಂದ ಪ್ರತಿಯೊಂದಕ್ಕೂ ಲಂಚ ಪಡೆದು ದೌರ್ಜನ್ಯ ದಬ್ಬಾಳಿಕೆ ಮಾಡುತ್ತಿರುವುದು ಯಾರು. ಇಲ್ಲಿ ಭ್ರಷ್ಟಾಚಾರ ರಹಿತವಾಗಿ ಉತ್ತಮ ಸಾರ್ವಜನಿಕ ಕೆಲಸ ಮಾಡುವವರನ್ನು ನಾನು ಸ್ವಾಗತಿಸುತ್ತೇನೆ. ಭ್ರಷ್ಟಾಚಾರಿಗಳಿಗೆ ನಮ್ಮ ತಾಲ್ಲೂಕಿನಲ್ಲಿ ಅವಕಾಶವಿಲ್ಲ. ಯಾವ ಕೆಲಸ ಹೇಗೆ ಮಾಡಬೇಕೆಂಬ ಅರಿವು ನನಗಿದೆ. ರಾಜ್ಯದಲ್ಲಿ ರಾಷ್ಟ್ರಪತಿ ಹಾಗು ರಾಜ್ಯಪಾಲರ ಆಳ್ವಿಕೆ ಇಲ್ಲ. ಇಲ್ಲಿ ಒಬ್ಬರೇ ಮುಖ್ಯಮಂತ್ರಿ ಹಾಗೂ ಸಚಿವರಿದ್ದಾರೆ. ನಾನು ಅವರ ಬಳಿ ಹೋಗದೆ ನೇರವಾಗಿ ಅಧಿಕಾರಿಗಳ ಬಳಿ ಕೆಲಸ ತರುತ್ತೇನೆ ಎಂದು ಹೇಳುವವರಿಗೆ ನಾಚಿಕೆಯಾಗಬೇಕು. ಯಾವ ಯಾವ ಕಾಮಗಾರಿಗಳಲ್ಲಿ ನೀವು ಎಷ್ಟೆಷ್ಟು ಲಂಚ ಪಡೆದಿದ್ದೀರಿ ಎಂದು ನನ್ನಲ್ಲಿ ದಾಖಲೆಗಳಿವೆ. ನಾನಾಗಲಿ ಅಥವಾ ಇಲ್ಲಿರುವ ಯಾರೇ ಅಧಿಕಾರಿಗಳು ಭ್ರಷ್ಟಾಚಾರ ಮಾಡಿದ್ದರೆ ತಿಳಿಸಿ ಅವರ ವಿರುದ್ಧ ಕ್ರಮಕ್ಕೆ ಶಿಫಾರಸು ಮಾಡುತ್ತೇನೆ. ಇಲ್ಲಿ ಕೂಗಾಡಿದರೆ ನಾನು ಜಗ್ಗುವ ಮಗನಲ್ಲ. ಕ್ಷೇತ್ರದ ಸೇವಕನಾಗಿ ಭ್ರಷ್ಟಾಚಾರ ರಹಿತವಾಗಿ ಕೆಲಸ ಮಾಡುತ್ತಿರುವುದು ಇಡೀ ತಾಲ್ಲೂಕಿಗೆ ತಿಳಿದಿದೆ. ನಿಮ್ಮಿಂದ ಹೇಳಿಸಿಕೊಳ್ಳುವ ಅಗತ್ಯವಿಲ್ಲ ಎಂದು ತಿರುಗೇಟು ನೀಡಿದರು. ತಹಶಿಲ್ದಾರ್ ಶ್ರೀಧರ್ ಕಂಕನವಾಡಿ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಸತೀಶ್ ಕುಮಾರ್, ಆಡಳಿತಾಧಿಕಾರಿ ರಮೇಶ್, ವೃತ್ತ ನಿರೀಕ್ಷಕ ರೇವಣ್ಣ ಹಾಜರಿದ್ದರು.

> ಭ್ರಷ್ಟಾಚಾರ ಯಾರ ಅವಧಿಯಲ್ಲಿ ನಡೆದಿದೆ ಎಂಬುದು ಎಲ್ಲರಿಗೂ ಗೊತ್ತು. ಕ್ಷೇತ್ರದ ಅಭಿವೃದ್ಧಿಗೆ ಶಕ್ತಿಮೀರಿ ಕೆಲಸ ಮಾಡುತ್ತಿದ್ದೇನೆ. ನನ್ನ ಆಡಳಿತಾವಧಿಯಲ್ಲಿ ಒಂದು ರೂಪಾಯಿ ಭ್ರಷ್ಟಾಚಾರ ಅವಕಾಶವಿಲ್ಲ. ವಿರೋಧಿಗಳು ಜನರ ದಾರಿ ತಪ್ಪಿಸುತ್ತಿದ್ದಾರೆ.
>
> **– ಹೆಚ್.ಕೆ.ಸುರೇಶ್, ಶಾಸಕ**



# ಉಡ ಬೇಟೆ: ಮೂವರ ಬಂಧನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಮಾರನಹಳ್ಳಿ ಶಾಖೆಯ ಕಾಡುಮನೆ ಎಸ್ಟೇಟ್ ಸರ್ವೆ ನಂ. 2ರ ಮೀಸಲು ಅರಣ್ಯ ಪ್ರದೇಶದಲ್ಲಿ ಸೋಮವಾರ ಬೆಳಿಗ್ಗೆ 9 ಗಂಟೆ ಸಮಯದಲ್ಲಿ ಗಸ್ತು ತಿರುಗುವಾಗ ಅಕ್ರಮವಾಗಿ ಉಡ ಬೇಟೆಯಾಡಿ ಮಾಂಸವನ್ನಾಗಿ ಪರಿವರ್ತಿಸುತ್ತಿರುವುದು ಪತ್ತೆಯಾಗಿದೆ.

ದಕ್ಷಿಣ ಕನ್ನಡ ಜಿಲ್ಲೆ ಶಿರಾಡಿ ಗ್ರಾಮದ ಬಾಬು, ಕೇರಳದ ಬಿನೋಯಿ ಹಾಗು ಸಿಂಗಲ್ ಬ್ಯಾರೆಲ್ ಗನ್ ಅನ್ನು ವಶಪಡಿಸಿಕೊಂಡು ಪ್ರಕರಣ ದಾಖಲಾಗಿದೆ. ಉಳಿದ ಆರೋಪಿಗಳಾದ ಜೋಶ್ (ಶಿರಾಡಿ), ಜೇಮ್ಸ್ (ಉದಾನೆ), ಅಭಿಲಾಷ್ (ಶಿರಾಡಿ), ಪ್ರದೀಪ್ (ಉದಾನೆ), ಬಾಬು (ಎಂಜಿರ) ತಲೆಮರೆಸಿಕೊಂಡಿದ್ದಾರೆ.



ಸಂಘದ ಶ್ರೇಯೋಭಿವೃದ್ಧಿಗೆ ಶ್ರಮಿಸುವೆ | ನೂತನ ಅಧ್ಯಕ್ಷ ಜೆ.ಆರ್.ಕೆಂಚೇಗೌಡ

# ಪತ್ರಕರ್ತರ ಸಂಘದ ಚುನಾಯಿತ ಪ್ರತಿನಿಧಿಗಳಿಗೆ ಪ್ರಮಾಣ ಪತ್ರ ವಿತರಣೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ನೂತನ ಮಂಡಳಿ ಆಯ್ಕೆಗೆ ಭಾನುವಾರ ನಡೆದ ಚುನಾವಣೆಯಲ್ಲಿ ವಿಜೇತರಾದ ಪದಾಧಿಕಾರಿಗಳು ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರಿಗೆ ಸೋಮವಾರ ಗೆಲುವಿನ ದೃಢೀಕರಣ ಪತ್ರ ವಿತರಿಸಲಾಯಿತು.




ಸಂಘದ ಕಚೇರಿಯಲ್ಲಿ ಜಿಲ್ಲಾ ಚುನಾವಣಾಧಿಕಾರಿ ಡಿ.ಜೆ. ರಾಜೇಶ್ ಮತ್ತು ಸಹಾಯಕ ಚುನಾವಣಾಧಿಕಾರಿಯಾಗಿ ಕೆ.ಎಂ. ಮೋಹನ್ ಕುಮಾರ್ ಪ್ರಮಾಣ ಪತ್ರ ವಿತರಣೆ ಮಾಡಿದರು.

ನಂತರ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ನೂತನ ಅಧ್ಯಕ್ಷ ಜೆ.ಆರ್.ಕೆಂಚೇಗೌಡ, ಒಂದು ತಂಡ ಗೆಲ್ಲಲು ಎಲ್ಲರೂ ಪ್ರಮುಖ ಪಾತ್ರ ವಹಿಸಿದರು. ಇದಕ್ಕಾಗಿ ಜಿಲ್ಲೆಯ ಎಲ್ಲ ಪತ್ರಕರ್ತರಿಗೆ ಅಭಿನಂದನೆ ಹೇಳಿದರು. ನಾವೆಲ್ಲ ಒಂದು ತಂಡವಾಗಿ ಅಭೂತಪೂರ್ವ ಗೆಲುವು ಸಾಧಿಸಲು ಹೆಚ್.ಬಿ. ಮದನಗೌಡ, ಶಿವಾನಂದ ತಗಡೂರು, ರವಿ ನಾಕಲಗೂಡು ಒಟ್ಟಾಗಿ ಸಾಥ್ ಕೊಟ್ಟರು. ಮಾಜಿ ಅಧ್ಯಕ್ಷರಾದ ಬಾಳ್ಳುಗೋಪಾಲ್, ಬಿ.ಆರ್.ಉದಯ ಕುಮಾರ್, ಅತೀಖುರ್ ರೆಹಮಾನ್ ಸಹ ಉತ್ತಮ ಕೆಲಸ ಮಾಡಿದರು ಎಂದರು.

ಮುಂದೆ ಸಂಘದ ಶ್ರೇಯೋಭಿವೃದ್ಧಿಗಾಗಿ ಏನೇ ಕೆಲಸ ಕಾರ್ಯ ಮಾಡಿದರೂ, ಒಂದು ಸ್ಪಷ್ಟವಾದ ರೂಪುರೇಷೆ, ಗುರಿಯೊಂದಿಗೆ ನಡೆಯೋಣ. ಸರ್ವರ ಸಲಹೆ, ಸಹಕಾರ ಪಡೆದು ಮುಕ್ತ ನಿರ್ಧಾರ ತೆಗೆದುಕೊಳ್ಳುತ್ತೇವೆ. ಇದರಲ್ಲಿ ಯಾವುದೇ ಅನುಮಾನ ಬೇಡ, ಎಲ್ಲರೂ ಒಂದು ತಂಡವಾಗಿ ಕೆಲಸ ಮಾಡೋಣ ಎಂದರು.

ಮಾಜಿ ಅಧ್ಯಕ್ಷ ಬಾಳ್ಳುಗೋಪಾಲ್ ಮಾತನಾಡಿ, ಎಲ್ಲರ ಬೆಂಬಲದಿಂದ ಗಲಾಟೆ, ಗೊಂದಲ ಇಲ್ಲದೆ ಶಾಂತಿಯುತವಾಗಿ ಚುನಾವಣೆ ನಡೆದಿದೆ. ಚುನಾವಣೆ ಮುಗಿದ ಮೇಲೆ ನಾವೆಲ್ಲರೂ ಒಂದೆ. ನಮ್ಮ ನಮ್ಮ ನಡುವೆ ಯಾವುದೇ ಮುನಿಸು ಬೇಡ. ಜಿಲ್ಲೆಯ ಎಲ್ಲ 288 ಪತ್ರಕರ್ತರನ್ನು ಒಂದೇ ರೀತಿ ಕಾಣಬೇಕು. ಮುಂದಿನ ದಿನಗಳಲ್ಲಿ ಜಿದ್ದಾಜಿದ್ದಿ ಬದಲು ಅವಿರೋಧ ಆಯ್ಕೆ ಮಾಡುವ ವಾತಾವರಣ ನಿರ್ಮಾಣ ಮಾಡಲು ಸ್ಪಂದಿಸಿ ಎಂದು ಸಲಹೆ ನೀಡಿದರು.

ಮೊದಲೇ ಮಾದರಿ ರಾಜ್ಯದಲ್ಲೇ ಮಾದರಿ ಎನಿಸಿಕೊಂಡಿರುವ ನಮ್ಮ ಸಂಘ, ಮುಂದೆಯೂ ಹಾಗೆಯೇ ಇರಬೇಕು ಎಂದು. ಆ ನಿಟ್ಟಿನಲ್ಲಿ ಎಲ್ಲರೂ ಕೆಲಸ ಮಾಡಿ ಎಂದು ಹೇಳಿದರು.

ಮತ್ತೊಬ್ಬ ಮಾಜಿ ಅಧ್ಯಕ್ಷ ರವಿ ನಾಕಲಗೂಡು ಮಾತನಾಡಿ, ಹಿಂದಿನ ಎಲ್ಲ ಅಧ್ಯಕ್ಷರು ಸಂಘಕ್ಕೆ ತಮ್ಮ ಕೈಲಾದ ಸಹಾಯ ಮಾಡಿ ಹೋಗಿದ್ದಾರೆ. ಅವರು ಹಾಕಿರುವ ಭದ್ರ ಬುನಾದಿಯಿಂದ ಇಂದು ಸಂಘಟನಾತ್ಮಕವಾಗಿ ಕೆಲಸ ಮಾಡಲು ಸಾಧ್ಯವಾಗಿದೆ.


ಕೆಂಚೇಗೌಡ ಅವರ ಅವಧಿಯಲ್ಲೂ ಉತ್ತಮ ಕೆಲಸ ಆಗಲಿ, ಮುಂದೆಯೂ ಅದೇ ಪರಂಪರೆ ಮುಂದುವರಿಯಲಿ ಎಂದು ಆಶಿಸಿದರು.

ಇಂದಿನ ಗೆಲುವು ಸಂಘಟನೆಯಲ್ಲಿ ಬಲವಿದೆ ಎಂಬುದಕ್ಕೆ ಸಾಕ್ಷಿಯಾಗಿದೆ. ಮುಂದಿನ ದಿನಗಳಲ್ಲಿ ಸಂಕಷ್ಟದಲ್ಲಿರುವ ಪತ್ರಕರ್ತರಿಗೆ ನೆರವಾಗಲು ಕ್ಷೇಮನಿಧಿಯನ್ನು 1 ಕೋಟಿ ರೂ.ಗೆ ಏರಿಸಬೇಕು ಎಂದು ಮನವಿ ಮಾಡಿದರು. ನೂತನ ಉಪಾಧ್ಯಕ್ಷ ಎನ್.ನಂಜುಂಡೇಗೌಡ ಮಾತನಾಡಿ, ಮುಂದೆ ಏನು ಮಾಡಬೇಕು ಎಂಬುದರ ಬಗ್ಗೆ ಕುಳಿತು ಚರ್ಚಿಸಿ, ಕಾರ್ಯಕಾರಿ ಸಮಿತಿ ಸಭೆಯಲ್ಲಿ ಚರ್ಚಿಸಿ ಹೆಜ್ಜೆ ಇಡೋಣ ಎಂದರು.

ಇದಕ್ಕೂ ಮುನ್ನ ಬಿ.ಆರ್. ಉದಯಕುಮಾರ್, ಜಗದೀಶ್ ಚೌಡವಳ್ಳಿ, ಅತೀಖುರ್ ರೆಹಮಾನ್, ಮಂಜು ಬನವಾಸೆ, ಸುರೇಶ್ ಕುಮಾರ್ ಮಾತನಾಡಿದರು.

ನೂತನ ಕಾರ್ಯದರ್ಶಿ ಬಿ.ಆರ್.ಬೊಮ್ಮೇಗೌಡ ಸ್ವಾಗತಿಸಿದರೆ, ಕೆ.ಎಂ. ಹರೀಶ್ ವಂದಿಸಿದರು.

ಚುನಾವಣೆಯಲ್ಲಿ ಯಶಸ್ವಿಯಾಗಿ ಕಾರ್ಯ ನಿರ್ವಹಿಸಿದ ಚುನಾವಣಾ ಅಧಿಕಾರಿಗಳನ್ನು ಸನ್ಮಾನಿಸಿ ಅಭಿನಂದಿಸಲಾಯಿತು.



# ಹೋಂ ಸ್ಟೇಗಳು ಪ್ರವಾಸೋದ್ಯಮ ಬೆಳವಣಿಗೆಗೆ ಪೂರಕ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕಿನ ಹೋಂ ಸ್ಟೇಗಳು ಪ್ರವಾಸೋದ್ಯಮದ ಅಭಿವೃದ್ಧಿ ಮತ್ತು ಪರಿಸರ ಸಂರಕ್ಷಣೆಯ ಮೇಲೆ ವಿಶೇಷ ಗಮನ ಹರಿಸುತ್ತಿವೆ ಎಂದು ಹೋಂ ಸ್ಟೇ ಮಾಲೀಕರ ಸಂಘದ ಅಧ್ಯಕ್ಷ ಮಾಲ್ಮನೆ ಪುರುಷೋತ್ತಮ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಒಂಬತ್ತು ವರ್ಷಗಳ ಹಿಂದೆ ಹೋಂ ಸ್ಟೇ ಮಾಲೀಕರ ಸಂಘವು ಸ್ಥಾಪನೆಯಾಗಿ ಸಕಲೇಶಪುರ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಹೋಂ ಸ್ಟೇ ಮಾಲೀಕರಿಗೆ ಸಮೂಹ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತಿದೆ. ಪ್ರಸ್ತುತ ಹೊಸ ಕಾರ್ಯಕಾರಿ ಸಮಿತಿ ರಚನೆಯಾಗಿದ್ದು, ಅದರಲ್ಲಿ ತಾವು ಅಧ್ಯಕ್ಷರಾಗಿ, ಉಪಾಧ್ಯಕ್ಷ, ಕಾರ್ಯದರ್ಶಿ ಹಾಗೂ ಖಜಾಂಚಿ ಸೇರಿ ಒಟ್ಟು 14 ಸದಸ್ಯರ ಸಮಿತಿಯು ಕಾರ್ಯನಿರ್ವಹಿಸಲಿದ್ದು, ಸಂಘದ ಚಟುವಟಿಕೆಗಳನ್ನು ಹೆಚ್ಚು ಬಲಪಡಿಸಲು ಉತ್ಸಾಹದಿಂದ ಮುಂದಾಗಿದೆ ಎಂದರು.




ಪ್ರತಿ ವರ್ಷ ಸಂಘದ ವತಿಯಿಂದ ಜಿಲ್ಲೆಯ ವಿವಿಧ ಪ್ರವಾಸಿ ತಾಣಗಳಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಈ ಕಾರ್ಯಕ್ಕೆ ಸರ್ಕಾರದಿಂದ ಯಾವುದೇ ಆರ್ಥಿಕ ನೆರವು ಪಡೆಯದೆ, ಸಂಘದ ಸದಸ್ಯರ ಸಹಕಾರದಿಂದಲೇ ಈ ಚಟುವಟಿಕೆಗಳು ನಡೆಯುತ್ತಿವೆ ಎಂದು ಹೇಳಿದರು. ಪ್ಲಾಸ್ಟಿಕ್ ಮಾಲಿನ್ಯ ತಡೆಗಟ್ಟುವ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಹೋಂ ಸ್ಟೇ ಮಾಲೀಕರ ಸಂಘದಿಂದ ವಿವಿಧ ಕಾರ್ಯಕ್ರಮಗಳು ನಡೆಯುತ್ತಿವೆ ಎಂದು ಅವರು ತಿಳಿಸಿದರು. ಮಲೆನಾಡಿನ ನೈಸರ್ಗಿಕ ಸೌಂದರ್ಯ, ತೋಟಗಾರಿಕೆ, ಸಾಂಪ್ರದಾಯಿಕ ಆಹಾರ ಪದ್ಧತಿ ಮತ್ತು ಸ್ಥಳೀಯ ಸಂಸ್ಕೃತಿಯನ್ನು ಪ್ರವಾಸಿಗರಿಗೆ ಪರಿಚಯಿಸುವುದು ನಮ್ಮ ಉದ್ದೇಶ. ಸರ್ಕಾರದಿಂದ ಪ್ರವಾಸೋದ್ಯಮ ಇಲಾಖೆಯ ಸಹಕಾರ ಸಿಗುತ್ತಿಲ್ಲ. ಸಕಲೇಶಪುರ ತಾಲೂಕಿನಲ್ಲಿನ ಹತ್ತಾರು ಸುಂದರ ತಾಣಗಳಿಗೆ ಸೂಕ್ತ ರಸ್ತೆ, ಸೌಕರ್ಯ ಹಾಗೂ ಶೌಚಾಲಯಗಳ ಕೊರತೆಯಿಂದ ಪ್ರವಾಸಿಗರು ತೊಂದರೆ ಅನುಭವಿಸುತ್ತಿದ್ದಾರೆಂದು ವಿಷಾದ ವ್ಯಕ್ತಪಡಿಸಿದರು.

ಹೋಂ ಸ್ಟೇ ಮಾಲೀಕರ ಸಂಘದ ಕಾರ್ಯದರ್ಶಿ ಪ್ರಸನ್ನ ಮಾತನಾಡಿ, ಮಾಲೀಕರ ಸಂಘವು ಕಳೆದ ಹಲವು ವರ್ಷಗಳಿಂದ ಅತ್ಯಂತ ಅಚ್ಚುಕಟ್ಟಾಗಿ ಯಾವುದೇ ಕಪ್ಪು-ಚುಕ್ಕಿ ಇಲ್ಲದೆ ಕಾರ್ಯನಿರ್ವಹಿಸುತ್ತಿದೆ.

ಸಂಘದ ಉದ್ದೇಶ ಕೇವಲ ಹೋಂ ಸ್ಟೇಗಳ ಬೆಳವಣಿಗೆಗೆ ಸೀಮಿತವಾಗದೆ ಸ್ವಚ್ಛತೆ ಮತ್ತು ಪರಿಸರ ಸಂರಕ್ಷಣೆಗೆ ಪ್ರಾಮುಖ್ಯತೆ ನೀಡುವುದಾಗಿದೆ ಎಂದು ಹೇಳಿದರು. ಸಕಲೇಶಪುರದ ಹೋಂ ಸ್ಟೇ ಮಾಲೀಕರು ಹಾಗೂ ಸ್ಥಳೀಯರು ಕೈಜೋಡಿಸಿ ಸ್ವಚ್ಛತಾ ಕಾರ್ಯವನ್ನು ಆದ್ಯತೆಯಾಗಿ ಕೈಗೊಳ್ಳಬೇಕು. ಸಕಲೇಶಪುರದ ನೈಸರ್ಗಿಕ ಸೌಂದರ್ಯವನ್ನು ಅನುಭವಿಸಲು ಬರುವ ಪ್ರವಾಸಿಗರಿಗೆ ಉತ್ತಮ ಗುಣಮಟ್ಟದ ವಸತಿ, ಆಹಾರ ಮತ್ತು ಆತಿಥ್ಯ ಒದಗಿಸುವ ಮೂಲಕ ಸಕಲೇಶಪುರದ ಖ್ಯಾತಿಯನ್ನು ಮತ್ತಷ್ಟು ಎತ್ತರಕ್ಕೆ ಏರಿಸಬೇಕು. ನಮ್ಮ ಉದ್ದೇಶ ಸಕಲೇಶಪುರದ ಪ್ರವಾಸೋದ್ಯಮವನ್ನು ರಾಷ್ಟ್ರ ಮಟ್ಟಕ್ಕೆ ತಲುಪಿಸುವುದಾಗಿದೆ ಎಂದು ಪ್ರಸನ್ನ ಹೇಳಿದರು. ಪದಾಧಿಕಾರಿಗಳಾದ ವಿಕ್ರಂ, ಗೌತಮ್, ಯಶವಂತ್ ಉಪಸ್ಥಿತರಿದ್ದರು.

# ತಂತ್ರಜ್ಞಾನ ಬೆಳೆದಂತೆ ಎಐ ಅವಶ್ಯಕತೆಯೂ ಹೆಚ್ಚುತ್ತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿಜ್ಞಾನ ತಂತ್ರಜ್ಞಾನ ಬೆಳೆದಂತೆ ಹೊಸ ಸವಾಲುಗಳು ಎದುರಾಗುತ್ತಿದ್ದು ಕೃತಕ ಬುದ್ಧಿಮತ್ತೆ (ಎಐ) ಅವಶ್ಯಕತೆ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚುತ್ತದೆಯೆಂದು ಮಲೆನಾಡು ತಾಂತ್ರಿಕ ಶಿಕ್ಷಣ ಸಮಿತಿ ಅಧ್ಯಕ್ಷ ಆರ್.ಟಿ.ದ್ಯಾವೇಗೌಡ ಹೇಳಿದರು.

ಕಾಲೇಜಿನ ಕಂಪ್ಯೂಟರ್ ವಿಭಾಗದಿಂದ ಏರ್ಪಡಿಸಿದ್ದ ಆರ್ಟಿಫಿಷಲ್ ಇಂಟಲಿಜೆನ್ಸ್ ಜನರೇಟೀವ್ ಪರಿಚಯ ಕುರಿತು ರಾಜ್ಯ, ಅಂತಾರಾಜ್ಯದ ಇಂಜಿನಿಯರಿಂಗ್ ಉಪನ್ಯಾಸಕರಿಗೆ ಹಾಗೂ ತರಬೇತಿದಾರರಿಗೆ ಹಮ್ಮಿಕೊಂಡಿದ್ದ ಆರು ದಿನಗಳ ತರಬೇತಿ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಆಧುನಿಕ ದಿನಗಳಲ್ಲಿ ಸವಾಲು, ತಾಂತ್ರಿಕ ಜ್ಞಾನ, ಟೆಕ್ನಾಲಜಿ, ಪ್ರಾಯೋಗಿಕ ವಿಧಾನಗಳ ಅವಶ್ಯಕತೆ ಇದೆ. ಕಂಪ್ಯೂಟರ್, ಎಐ ಜ್ಞಾನಾರ್ಜನೆಗಾಗಿ, ವೇಗದ ಕೆಲಸ ಕಾರ್ಯಗಳನ್ನು ಕೈಗೊಳ್ಳಲು ಅವಶ್ಯಕತೆ ಹೆಚ್ಚಿದೆ. ಕಲಿಕಾ ನಿರ್ವಹಣೆ ವ್ಯವಸ್ಥೆಯಲ್ಲಿ ಅತ್ಯುತ್ತಮ ಸಂಶೋಧನೆ



ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ಎಐ ಉದಯೋನ್ಮುಖ ಪಾತ್ರ ವಹಿಸುತ್ತದೆಂದರು.

ಅಧ್ಯಾಪಕರು ಮತ್ತು ಸಂಶೋಧಕರಿಗೆ ತರಬೇತಿ ಅಗತ್ಯವಿದೆ. ನಮ್ಮ ಕಾಲೇಜಿನಲ್ಲಿ ಆರ್ಟಿಫಿಷಿಯಲ್ ಇಂಟಲಿಜೆನ್ಸಿ ಇಂಜಿನಿಯರಿಂಗ್, ಕೋರ್ಸ್ ಅನ್ನು ಕಳೆದ ವರ್ಷದಿಂದ ಪ್ರಾರಂಭಿಸಲಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಕಂಪ್ಯೂಟರ್ ಕೋರ್ಸ್‌ನಲ್ಲಿ 400ಕ್ಕೂ ಹೆಚ್ಚು ವಿದ್ಯಾರ್ಥಿಗಳಿದ್ದಾರೆ ಎಂದರು.

ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಚೌಡಳ್ಳಿ ಜಗದೀಶ್ ಶುಭ ಕೋರಿದರು.

# ಜನಪರ ಕೆಲಸ ಮಾಡಿದರೆ ಸ್ಥಾನಮಾನ ಒಲಿದು ಬರುತ್ತೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಚುನಾಯಿತ ಜನಪ್ರತಿನಿಧಿಗಳು ತಮಗೆ ಸಿಕ್ಕ ಅವಕಾಶವನ್ನು ಬಳಸಿಕೊಂಡು ಜನಪರ ಕೆಲಸ ಮಾಡಿದರೆ ರಾಜಕೀಯವಾಗಿ ಇನ್ನಷ್ಟು ಉನ್ನತ ಸ್ಥಾನಮಾನಗಳು ತಮ್ಮನ್ನು ಅರಸಿ ಬರುತ್ತದೆ ಎಂದು ಗೃಹ ನಿರ್ಮಾಣ ಮಂಡಳಿಯ ಅಧ್ಯಕ್ಷ ಕೆ.ಎಂ. ಶಿವಲಿಂಗೇಗೌಡ ಹೇಳಿದರು.


ತಾಲ್ಲೂಕಿನ ಮುದುಡಿ ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ನಾಗೇಶ್ ಅವರನ್ನು ಅಭಿನಂದಿಸಿ ಮಾತನಾಡಿ, ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳು ಜನರ ಬೇಕು ಬೇಡಗಳನ್ನು ಹತ್ತಿರದಿಂದ ಬಲ್ಲವರಾಗಿದ್ದು ಜನರ ನೋವು ನಲಿವಿಗೆ ಸ್ಪಂದಿಸಿ ಕೆಲಸ ಮಾಡುವ ಮನಸ್ಥಿತಿಯನ್ನು ನೀವು ಬಳಸಿಕೊಂಡಿದ್ದೆ ಆದರೆ ಭವಿಷ್ಯದಲ್ಲಿ ಉತ್ತಮ ಜನನಾಯಕರಾಗಿ ಹೊರಹೊಮ್ಮುವುದರಲ್ಲಿ ಸಂದೇಹವಿಲ್ಲ ಎಂದರು.

ನಗರಸಭೆ ಸೇರಿದಂತೆ ಗ್ರಾಪಂ, ಜಿಪಂ ಹಾಗೂ ತಾಪಂ ಸ್ಥಳೀಯ ಸಂಸ್ಥೆಗಳ ಚುನಾಯಿತ ಜನಪ್ರತಿನಿಧಿಗಳು ತಮ್ಮ ಕ್ಷೇತ್ರ ವ್ಯಾಪ್ತಿಯಲ್ಲಿ ಜನಪರವಾಗಿ ಮಾಡಬೇಕಿರುವ ಕೆಲಸ ಕಾರ್ಯಗಳನ್ನು ಅರಿತು ನನ್ನ ಗಮನಕ್ಕೆ ತೊಂದರೆ ಸ್ಥಳೀಯ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗಲಿದೆ. ಇದಕ್ಕೆ ನಮ್ಮ ಪಕ್ಷ ಪ್ರತಿಪಕ್ಷ ಎಂಬ ಭೇದ ಭಾವ ಬೇಡ ಎಂದು ಕರೆ ನೀಡಿದರು. ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಾಗೇಶ್ ಮಾತನಾಡಿ, ಶಾಸಕ ಶಿವಲಿಂಗೇಗೌಡ ಅವರ ಮಾರ್ಗದರ್ಶನದಲ್ಲಿ ಗ್ರಾಮ ಪಂಚಾಯಿತಿಯ ಹಿರಿಯ-ಕಿರಿಯ ಎಲ್ಲಾ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ನನಗೆ ಸಿಕ್ಕಿರುವ ಈ ಅವಕಾಶದಲ್ಲಿ ನಮ್ಮ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಹಳ್ಳಿಗಳ ಅಭಿವೃದ್ಧಿಗೆ ಶ್ರಮಿಸುವುದಾಗಿ ಭರವಸೆ ನೀಡಿದರು.

ನೂತನ ಅಧ್ಯಕ್ಷರನ್ನು ನಿಕಟಪೂರ್ವ ಅಧ್ಯಕ್ಷ ಮೋಕ್ಷ ಶಂಭುಲಿಂಗೇಗೌಡ, ಪ್ರಕಾಶ್, ಸದಸ್ಯರಾದ ಮೋಹನ್ ನಾಯ್ಕ, ಲಕ್ಷ್ಮೀಬಾಯಿ ಮತ್ತಿತರರು ಹಾಜರಿದ್ದರು.

# ಅಮೀಬಾ ಆತ ಆಫ್ರಿಕವನ್ನೇ ಗೆದ್ದನು!

**- ರಜನೀಶ ಸಾಗರ**




ಶ್ರಮ ಇದ್ದರೆ ಮನುಷ್ಯರು ಋಷಿಗಳಷ್ಟೇ ಅಲ್ಲ ಕೋಟೀಶ್ವರರು ಕೂಡ ಆಗುತ್ತಾರೆ. ಸಾಮಾನ್ಯ ರೈತರ ಕುಟುಂಬದಲ್ಲಿ ಹುಟ್ಟಿ ಮೆಟಲರ್ಜಿ ವಿಷಯದ ಮೇಲಿನ ವಿಶ್ವಾಸದಿಂದ ಆಮೇಲೆ ದೊರೆತ ಐಐಟಿ ಸೀಟ್ ಅನ್ನು ತಿರಸ್ಕರಿಸಿ, ದುರ್ವಸನಗಳಿಗೆ ಒಳಗಾಗಿ, ಆಮೇಲೆ ಆತ್ಮಪ್ರಕ್ಷಾಲನದ ಮೂಲಕ ಸಂಸ್ಕರಿಸಿಕೊಂಡು, ಆರ್ಥಿಕ ಸಂಕಷ್ಟಗಳ ಕಾರಣ 400 ರೂಪಾಯಿಗಳ ಸಂಬಳದ ಉದ್ಯೋಗಕ್ಕೆ ಸೇರಿಕೊಂಡು, ಪ್ರಸ್ತುತ 12000 ಕೋಟಿ ರೂ.ಗಳ ಟರ್ನ್ ಓವರ್ ಮೂಲಕ 20,000 ಜನರಿಗೆ ಜೀವನೋಪಾಯ ಕಲ್ಪಿಸುತ್ತಿರುವ ಒಬ್ಬ ವಾಣಿಜ್ಯೋದ್ಯಮಿಯ ಜೀವನ ಕಥನ. ಬಂಡವಾಳವಿಲ್ಲದೆ ಸ್ವೆಟ್ ಕ್ಯಾಪಿಟಲ್ ಮೂಲಕ ಪ್ರಾರಂಭಿಸಿ, ಆಫ್ರಿಕಾದ ದೇಶಗಳಲ್ಲಿ ಬೇರೂರಿಕೊಂಡಿದ್ದ ಫ್ರೆಂಚ್ ಜರ್ಮನಿ ಯುರೋಪಿಯನ್ ವಲಸಿಗರ ಸಿಮೆಂಟ್ ಮಾಫಿಯಾ ಮೇಲೆ ಒಂಟಿಯಾಗಿ ಹೋರಾಟ ನಡೆಸಿದ ದಣಿವರಿಯದ ಅಭಿಮನ್ಯುವಿನ ಕಥೆ.

ಜೀವನದಲ್ಲಿ ಮೇಲಕ್ಕೆ ಬರಬೇಕೆಂದರೆ ತಪ್ಪದೇ ಫಸ್ಟ್ ರ್ಯಾಂಕ್ ಬರುವ ಅವಶ್ಯಕತೆ ಇಲ್ಲವೆಂದೂ, ಜೀವನವನ್ನು ಯಾವಾಗ ಬೇಕಾದರೂ ಎಲ್ಲಿಂದಲಾದರೂ ಪ್ರಾರಂಭಿಸಬಹುದು ಎಂದು ಯುವಕರಿಗೆ ಸ್ಫೂರ್ತಿಯನ್ನು ಕೊಡುವ ಒಬ್ಬ ಸಾಮಾನ್ಯನ ಅಸಾಮಾನ್ಯ ಕಥೆ. ಅಂತರಾಷ್ಟ್ರೀಯ ವ್ಯಾಪಾರದ ಚದುರಂಗದಲ್ಲಿ ಇವತ್ತಿನ ತನಕ ಬಂದಿರದ ತಂತ್ರಗಳ ಮೇಲೆ ತಂತ್ರಗಳನ್ನು ಹೆಣೆಯುವುದನ್ನು ಕುರಿತು ಸಮಗ್ರ ವಿಶ್ಲೇಷಣಾತ್ಮಕ ಪುಸ್ತಕ.

ಪುಸ್ತಕದ ಮೂಲ ಕೃತಿಕಾರರು ಅತ್ಯಂತ ಜನಪ್ರಿಯ ಕಾದಂಬರಿಕಾರರು ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರು ಆದ ಕನ್ನಡದ ಮುಟ್ಟಿಗಂತು ಇವರು ಕನ್ನಡದ ಲೇಖಕರೇ ಎನ್ನುವಷ್ಟು ಜನಪ್ರಿಯರು. ಪರಿಚಿತರು, ಸ್ಫೂರ್ತಿದಾಯಕ ಮಾತುಗಾರರಾಗಿ ವಿವಿಧ ದೇಶಗಳಲ್ಲಿ ಸಂಚರಿಸಿರುವ ಯಂಡಮೂರಿ ವೀರೇಂದ್ರನಾಥ್. ಇಂದಿಗೂ, ಎಂದೆಂದಿಗೂ ಜನಪ್ರಿಯ ಕಾದಂಬರಕಾರರು. ಇದನ್ನು ಕನ್ನಡಕ್ಕೆ ಸಮರ್ಥವಾಗಿ ಅನುವಾದಿಸಿದವರು ಗಣೇಶ್ ಭಟ್ಟ ಕೊಪ್ಪಲತೋಟ. ಈ ಕೃತಿಯನ್ನು ಟಿಸಾಹಿತ್ಯ ಪ್ರಕಾಶನಟಿ ಹುಬ್ಬಳ್ಳಿ, ಇವರು ಪ್ರಕಟಿಸಿದ್ದಾರೆ .280 ಪುಟಗಳ ಈ ಕೃತಿ 395 ರೂಪಾಯಿ ಮುಖಬೆಲೆಯನ್ನು ಹೊಂದಿದೆ.ಆಸಕ್ತ ಓದುಗರಿಗೆ ರವೀಂದ್ರ ಪುಸ್ತಕಾಲಯ, ಚಾಮರಾಜಪೇಟೆ, ಸಾಗರ ಇಲ್ಲಿ ರಿಯಾಯಿತಿ ದರದಲ್ಲಿ ದೊರೆಯುತ್ತದೆ.

# ಹೊಸೂರಿನಲ್ಲಿ ಪಶು ಆಸ್ಪತ್ರೆ ಕಾಮಗಾರಿಗೆ ಭೂಮಿಪೂಜೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲ್ಲೂಕಿನ ಹೊಸೂರು ಗ್ರಾಮದಲ್ಲಿ 50 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣಗೊಳ್ಳುವ ನೂತನ ಪಶು ಆಸ್ಪತ್ರೆಗೆ ಶಾಸಕ ಸಿಮೆಂಟ್ ಮಂಜು ಭೂಮಿಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು, ಪಶು ವೈದ್ಯಕೀಯ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ತಕ್ಷಣವೇ ಭರ್ತಿ ಮಾಡಬೇಕೆಂದು ಸರ್ಕಾರಕ್ಕೆ ಆಗ್ರಹಿಸಿದರು.

ತಾಲ್ಲೂಕಿನಲ್ಲಿ ಸುಮಾರು 31 ಸಾವಿರಕ್ಕೂ ಹೆಚ್ಚು ಜಾನುವಾರುಗಳಿದ್ದು, 16 ಪ್ರಾಥಮಿಕ ಪಶು ಆಸ್ಪತ್ರೆ ಕಾರ್ಯ ನಿರ್ವಹಿಸುತ್ತಿವೆ. ಆದರೆ ಅಗತ್ಯಕ್ಕೆ ತಕ್ಕಂತೆ ಪಶು ವೈದ್ಯರು, ಸಹಾಯಕರು ಹಾಗೂ ಡಿ ದರ್ಜೆ ನೌಕರರ ಕೊರತೆ ತೀವ್ರವಾಗಿದೆ. ಈ ಹಿಂದೆ ಹಲವು ಬಾರಿ ಪಶುಸಂಗೋಪನಾ ಸಚಿವರಿಗೆ ಮನವಿ ಸಲ್ಲಿಸಿದ್ದೇನೆ. ಆದರೂ ಸರ್ಕಾರ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ನಿರಾಸಕ್ತಿ ತೋರಿಸುತ್ತಿರುವುದು ಬೇಸರದ ವಿಚಾರ ಎಂದು ವಿಷಾದ ವ್ಯಕ್ತಪಡಿಸಿದರು.

ಜಾನುವಾರುಗಳಿಗೆ ಅಗತ್ಯವಿರುವ ಲಸಿಕೆಗಳನ್ನು ನಿಯಮಿತವಾಗಿ ಹಾಕಿಸುವುದರಿಂದ ರೋಗಗಳನ್ನು ತಡೆಗಟ್ಟಬಹುದು ಮತ್ತು ಹರಡದಂತೆ ತಡೆಯಬಹುದು. ಜಾನುವಾರುಗಳ ಆರೋಗ್ಯ ಕಾಪಾಡುವುದು ರೈತರ ಆರ್ಥಿಕ ಸ್ಥಿರತೆಗೆ ಸಹಾಯಕ ಎಂದರು.

ತಾಲೂಕು ಪಶು ವೈದ್ಯಾಧಿಕಾರಿ ವೆಂಕಟೇಶ್, ಹೊಸೂರು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಂಜುಳಾ, ಗ್ರಾಪಂ ಸದಸ್ಯರು, ಸ್ಥಳೀಯ ಮುಖಂಡರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ಇಂದು ಸೆಂಟ್ರಲ್ ಕಾಲೇಜಿನಲ್ಲಿ ಕನ್ನಡ ರಾಜ್ಯೋತ್ಸವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಸಾಲಗಾಮೆ ರಸ್ತೆಯಲ್ಲಿರುವ ಸೆಂಟ್ರಲ್ ಕಾಮರ್ಸ್ ಪ್ರಥಮ ದರ್ಜೆ ಕಾಲೇಜಿನಲ್ಲಿ ನ. 11ರ ಮಂಗಳವಾರ ಬೆಳಿಗ್ಗೆ 10 ಗಂಟೆಗೆ ಕನ್ನಡ ರಾಜ್ಯೋತ್ಸವ ಹಮ್ಮಿಕೊಳ್ಳಲಾಗಿದೆ.

ಶಾಸಕ ಹೆಚ್.ಪಿ.ಸ್ವರೂಪ್ ಅಧ್ಯಕ್ಷತೆ ವಹಿಸುವರು. ಮಹಾನಗರ ಪಾಲಿಕೆ ಮೇಯರ್ ಮೇಯರ್ ಗಿರೀಶ್ ಚನ್ನವೀರಪ್ಪ ಉದ್ಘಾಟನೆ ನೆರವೇರಿಸುವರು. ಸಾಹಿತಿ ಡಾ. ಸೀ.ಚ.ಯತೀಶ್ವರ್ ಅವರು ರಾಜ್ಯೋತ್ಸವ ಭಾಷಣ ಮಾಡಲಿದ್ದಾರೆ. ವೇದಿಕೆ ಕಾರ್ಯಕ್ರಮದ ಬಳಿಕ ಬೆಳಿಗ್ಗೆ 11 ಗಂಟೆಗೆ ವೀರಗಾಸೆ, ಯಕ್ಷಗಾನ, ಪೂಜಾ ಕುಣಿತ, ಹುಲಿ ಕುಣಿತ, ಕೊಡಗು ನೃತ್ಯ ಮೆರವಣಿಗೆ ನಡೆಯಲಿದೆಯೆಂದು ಪ್ರಕಟಣೆ ತಿಳಿಸಿದೆ.

## ಇತಿಹಾಸದಲ್ಲಿ ಈ ದಿನ

### ನವೆಂಬರ್-11

1918: ಪ್ರಥಮ ವಿಶ್ವಯುದ್ಧ ಅಧಿಕೃತವಾಗಿ ಅಂತ್ಯಗೊಂಡಿತು.

1954: ಅಮೆರಿಕಾದಲ್ಲಿ (ಯೋಧರ ದಿನ) ಎಂದು ಘೋಷಿಸಲಾಯಿತು.

1966: ನಾಸಾದ Gemini 12 ಬಾಹ್ಯಾಕಾಶ ನೌಕೆಯನ್ನು ಯಶಸ್ವಿಯಾಗಿ ಉಡಾಯಿಸಲಾಯಿತು

2008: ಭಾರತದ ಚಂದ್ರಯಾನ-1 ಚಂದ್ರನ ಕಕ್ಷೆಗೆ ಯಶಸ್ವಿಯಾಗಿ ಪ್ರವೇಶಿಸಿತು. ಇದು ಭಾರತದ ಬಾಹ್ಯಾಕಾಶ ಸಾಧನೆಯ ಪ್ರಮುಖ ಘಟ್ಟವಾಗಿತ್ತು.

1918: ಸ್ವಾತಂತ್ರ್ಯ ಹೋರಾಟಗಾರ ಹಾಗು ಶಿಕ್ಷಣ ತಜ್ಞ ಮೌಲಾನಾ ಅಬುಲ್ ಕಲಾಂ ಆಜಾದ್ ಅವರ ಜನ್ಮದಿನ. ಈ ದಿನವನ್ನು ಭಾರತದಲ್ಲಿ ರಾಷ್ಟ್ರೀಯ ಶಿಕ್ಷಣ ದಿನ ಎಂದು ಆಚರಿಸಲಾಗುತ್ತದೆ.

1999: ಭಾರತದ ಸುಪ್ರೀಂ ಕೋರ್ಟ್ ದೌರ್ಜನ್ಯ ಪ್ರಕರಣಗಳಲ್ಲಿ ಸಾಕ್ಷ್ಯಾಧಾರಗಳ ಪ್ರಾಮುಖ್ಯತೆ ಕುರಿತು ಮಹತ್ವದ ತೀರ್ಪು ನೀಡಿತು.

**ಜನನ**

1888: ಮೌಲಾನಾ ಅಬುಲ್ ಕಲಾಂ ಆಜಾದ್, ಭಾರತದ ಪ್ರಥಮ ಶಿಕ್ಷಣ ಸಚಿವ

1926: ಕಲ್ಕತ್ತಾ ಬಿಷಪ್ ಬಾಸಿಲ್, ಕ್ರಿಶ್ಚಿಯನ್ ಚಿಂತಕ

**ಮರಣ**


1970: ಪ್ರಸಿದ್ಧ ಚಲನಚಿತ್ರ ನಿರ್ಮಾಪಕ ಸಮರ್ಪಣ್ ಚಕ್ರವರ್ತಿ

# ವಿಶ್ವಕ್ಕೆ ಶಾಂತಿ ಸಂದೇಶ ಸಾರಿದ ಜೈನ ಧರ್ಮ

## ಶ್ರವಣಬೆಳಗೊಳದಲ್ಲಿ ನಾಲ್ಕನೇ ಪಾದುಕೆ ಉದ್ಘಾಟನೆ | ಉಪರಾಷ್ಟ್ರಪತಿ ಸೇರಿ ಹಲವರು ಭಾಗಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಶ್ರವಣಬೆಳಗೊಳ: ಜೈನ ಧರ್ಮ ವಿಶ್ವಕ್ಕೆ ಸತ್ಯ ಅಹಿಂಸೆಯ ಬೋಧನೆ ಮಾಡುತ್ತಿದೆ. ಶ್ರವಣಬೆಳಗೊಳದಲ್ಲಿರುವ ಬಾಹುಬಲಿ ಮೂರ್ತಿಯು ಜೈನ ಧರ್ಮದ ಪ್ರತೀಕ ಮಾತ್ರವಲ್ಲದೆ, ವಿಶ್ವ ಶಾಂತಿ ಸಂಕೇತವೂ ಆಗಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದರು.



ಶ್ರವಣಬೆಳಗೊಳ ದಿಗಂಬರ ಜೈನ ಮಹಾಸಂಸ್ಥಾನದಿಂದ ಗೊಮ್ಮಟ ನಗರದ ಬಾಹುಬಲಿ ತಾಂತ್ರಿಕ ಮಹಾವಿದ್ಯಾಲಯದ ಆವರಣದಲ್ಲಿ ಏರ್ಪಡಿಸಿದ್ದ 20ನೇ ಶತಮಾನದ ಪ್ರಥಮಾಚಾರ್ಯ ಚಾರಿತ್ರ ಚಕ್ರವರ್ತಿ ಪ.ಪೂ ಆಚಾರ್ಯ ಶ್ರೀ 108 ಶಾಂತಿಸಾಗರ ಮಹಾರಾಜರ ಪ್ರತಿಮೆ ಅನಾವರಣ ಸಮಾರಂಭದಲ್ಲಿ ಮಾತನಾಡಿ, ವಿಶ್ವದೆಲ್ಲೆಡೆ ಸಂಘರ್ಷದ ಸನ್ನಿವೇಶಗಳು ಉಂಟಾಗಿದ್ದು ಮನುಕುಲವೇ ಅಪಾಯಕ್ಕೆ ಸಿಲುಕಿದೆ. ಇಂತಹ ಸನ್ನಿವೇಶದಲ್ಲಿ ವಿಶ್ವ ಶಾಂತಿ ಸ್ಥಾಪಿಸಲು ಜೈನ ಮುನಿಗಳ ಮಾರ್ಗದರ್ಶನ ಅಗತ್ಯವಾಗಿದೆ ಎಂದರು.

ಶ್ರವಣಬೆಳಗೊಳ ಹಾಗೂ ಕರ್ನಾಟಕ ಅತ್ಯಂತ ಪವಿತ್ರ ಕ್ಷೇತ್ರವಾಗಿದ್ದು, ದೇಶದ ಕಲೆ ಸಂಸ್ಕೃತಿಯನ್ನು ಸಂರಕ್ಷಿಸಿ ಬೆಳೆಸುವಲ್ಲಿ ಕನ್ನಡಿಗರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಸರ್ಕಾರ ಜ್ಞಾನ ಭಾರತಿ ಮಿಷನ್ ಅಡಿಯಲ್ಲಿ ಪ್ರಾಚೀನ ಭಾಷೆಗಳ ಅಭಿವೃದ್ಧಿಗೆ ಒತ್ತು ನೀಡುತ್ತಿದೆ. ಪ್ರಾಕೃತ ಮತ್ತು ಕನ್ನಡಕ್ಕೆ ಪಾರಂಪರಿಕ ಭಾಷೆಯ ಸ್ಥಾನಮಾನ ನೀಡಲಾಗಿದ್ದು, ಸಂಶೋಧನೆ ಹಾಗೂ ಭಾಷೆಯ ಬೆಳವಣಿಗೆಗೆ ಹೆಚ್ಚಿನ ಮಹತ್ವ ನೀಡಲಾಗಿದೆ ಎಂದರು .

ಸಾನ್ನಿಧ್ಯ ವಹಿಸಿದ್ದ ಸ್ವಸ್ತಿಶ್ರೀ ಚಾರುಕೀರ್ತಿ ಪಂಡಿತಾಚಾರ್ಯವರ್ಯ ಭಟ್ಟಾರಕ ಪಟ್ಟಾಚಾರ್ಯವರ್ಯ ಸ್ವಾಮೀಜಿ ಮಾತನಾಡಿ, ದಿಗಂಬರ ಮುನಿ ಪರಂಪರೆಗೆ ಅಪಾರ ಕೊಡುಗೆ ನೀಡಿರುವ ಶಾಂತಿ ಸಾಗರ ಮಹಾರಾಜರು 1925ರಲ್ಲಿ ಶ್ರೀ ಕ್ಷೇತ್ರ ಶ್ರವಣಬೆಳಗೊಳಕ್ಕೆ ಭೇಟಿ ನೀಡಿ ಮಹಾಮಸ್ತಕಾಭಿಷೇಕದಲ್ಲಿ ಭಾಗವಹಿಸಿ ನೂರು ವರ್ಷಗಳು ಪೂರ್ಣಗೊಂಡ ಹಿನ್ನೆಲೆಯಲ್ಲಿ ಅದರ ಸವಿನೆನಪಿಗಾಗಿ ಅವರ ಪ್ರತಿಮೆ ಪ್ರತಿಷ್ಠಾಪನೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಶಾಂತಿ ಸಾಗರ ಮಹಾರಾಜರ ಜೀವನ ಸಂದೇಶ ಅಜರಾಮರವಾಗಿ ಉಳಿಯಬೇಕು ಎಂಬ ಉದ್ದೇಶದಿಂದ ಶಿಲಾಶಾಸನ ಪ್ರತಿಷ್ಠಾಪನೆ ಮಾಡುವುದರ ಜೊತೆಗೆ ನಾಲ್ಕನೇ ಬೆಟ್ಟಕ್ಕೆ ಶಾಂತಿಸಾಗರ ಮಹಾರಾಜರ ಹೆಸರಿಡಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರು ಘನ ಉಪಸ್ಥಿತಿ ವಹಿಸಿ ಮಾತನಾಡಿ, ಭಗವಾನ್ ಮಹಾವೀರರು ನಮಗೆ ಟಬದುಕು ಮತ್ತು ಬದುಕಲು ಬಿಡಿಟ ಎಂಬ ದೈವಿಕ ಸಂದೇಶವನ್ನು ನೀಡಿದರು. ನಾವು ಅವರ ದೈವಿಕ ಸಂದೇಶದಿಂದ ಸ್ಫೂರ್ತಿ ಪಡೆದು, ಅವರು ತೋರಿಸಿದ ಮಾರ್ಗವನ್ನು ಅನುಸರಿಸಿ ವಿಶ್ವ ಶಾಂತಿ ಮತ್ತು ಕಲ್ಯಾಣಕ್ಕಾಗಿ ಕೆಲಸ ಮಾಡಬೇಕು ಎಂದು ಹೇಳಿದರು. ಮೋಕ್ಷಪಡೆದ ಭಗವಾನ್ ಬಾಹುಬಲಿ, ಮಾನವನ ಆಧ್ಯಾತ್ಮಿಕ ಉನ್ನತಿ ಮತ್ತು ಮಾನಸಿಕ ಶಾಂತಿಗಾಗಿ ನಾಲ್ಕು ತತ್ವಗಳನ್ನು ಪ್ರತಿಪಾದಿಸಿದರು. ಅಹಿಂಸೆಯ ಮೂಲಕ ಸಂತೋಷ, ತ್ಯಾಗದ ಮೂಲಕ ಶಾಂತಿ, ಸ್ನೇಹದ ಮೂಲಕ ಪ್ರಗತಿ ಮತ್ತು ಧ್ಯಾನದ ಮೂಲಕ ಸಾಧನೆ ಎಂಬ ಸಂದೇಶ ನೀಡಿದ್ದರು. ಈ ತತ್ವಗಳು ಇಂದಿಗೂ ಪ್ರಸ್ತುತವಾಗಿವೆ ಮತ್ತು ವಿಶ್ವ ಶಾಂತಿ ಮತ್ತು ಕಲ್ಯಾಣಕ್ಕೆ ದಾರಿ ಮಾಡಿಕೊಡುತ್ತವೆಂದು ಹೇಳಿದರು.

ಜೈನ ಧರ್ಮವು ಪ್ರಾಚೀನ ಶ್ರವಣ ಸಂಪ್ರದಾಯದಿಂದ ಪಡೆದ ಧರ್ಮವಾಗಿದ್ದು, ಇದನ್ನು ಭಗವಾನ್ ಋಷಭದೇವ ಮತ್ತು ನಂತರದ ತೀರ್ಥಂಕರರು ಉತ್ತೇಜಿಸಿದರು. 24ನೇ ತೀರ್ಥಂಕರರಾದ ಭಗವಾನ್ ಮಹಾವೀರ ಸ್ವಾಮೀಜಿ ಅದಕ್ಕೆ ವ್ಯವಸ್ಥಿತ ರೂಪ ನೀಡಿದರು. ಭಗವಾನ್ ಮಹಾವೀರ ಸ್ವಾಮೀಜಿ ಸತ್ಯ, ಅಹಿಂಸೆ, ಕಳ್ಳತನ ಮಾಡದಿರುವುದು, ಬ್ರಹ್ಮಚರ್ಯ ಮತ್ತು ಸ್ವಾಧೀನ ಮಾಡದಿರುವುದು ಮುಂತಾದ ತತ್ವಗಳ ಮೂಲಕ ಶಾಂತಿಯುತ ಸಹಬಾಳ್ವೆ ಮತ್ತು ಸಾರ್ವತ್ರಿಕ ಸಹೋದರತ್ವದ ಹಾದಿಯನ್ನು ಬೆಳಗಿಸಿದರು. ಅವರು ಟಅಹಿಂಸಾ ಪರಮೋ ಧರ್ಮಃಟಿ ಎಂದು ಹೇಳುತ್ತಿದ್ದರು. ಅಂದರೆ ಅಹಿಂಸೆಯೇ ಶ್ರೇಷ್ಠ ಧರ್ಮ. ದೈಹಿಕ ಹಿಂಸೆಯಲ್ಲಿ ಮಾತ್ರವಲ್ಲದೆ ನಮ್ಮ ಆಲೋಚನೆಗಳು, ಮಾತುಗಳು ಮತ್ತು ಕಾರ್ಯಗಳಲ್ಲಿಯೂ ಸಹಾನುಭೂತಿ ಇರಬೇಕು ಎಂದು ಅವರು ನಮಗೆ ಕಲಿಸಿದರು.



ಇಂದಿನ ಕಾಲದಲ್ಲಿ, ಸಮಾಜದಲ್ಲಿ ಉದ್ವಿಗ್ನತೆ, ಕೋಪ ಮತ್ತು ಹಿಂಸೆ ಹೆಚ್ಚುತ್ತಿರುವಾಗ ಮಹಾವೀರ ಸ್ವಾಮೀಜಿ ಅವರ ಈ ಸಂದೇಶವು ನಮ್ಮನ್ನು ಶಾಂತಿ, ಸಹಬಾಳ್ವೆ ಮತ್ತು ಪ್ರೀತಿಯ ಕಡೆಗೆ ಕರೆದೊಯ್ಯುತ್ತದೆ ಎಂದು ತಿಳಿಸಿದರು.

ಆಚಾರ್ಯ ಶ್ರೀ ಶಾಂತಿಸಾಗರ್ ಮಹಾರಾಜ್ ಸಂಯಮದ ಜೀವಂತ ಸಾಕಾರವಾಗಿದ್ದರು. ಆಧ್ಯಾತ್ಮಿಕ ಜೀವನವು ಧರ್ಮಗ್ರಂಥಗಳಲ್ಲಿ ಮಾತ್ರವಲ್ಲದೆ ನಡವಳಿಕೆಯಲ್ಲೂ ಇದೆ. ಜೈನ ಧರ್ಮದ ಸಂಪ್ರದಾಯವನ್ನು ಅದ್ಭುತ ಪುನರುಜ್ಜೀವನಗೊಳಿಸಿರುವ ಅವರು ಸಂಯಮ ಮತ್ತು ಧ್ಯಾನದ ಆದರ್ಶಗಳಿಂದ ಸಮಾಜವನ್ನು ಬೆಳಗಿಸಿದ್ದಾರೆ ಎಂದು ತಿಳಿಸಿದರು.

ಒಬ್ಬ ಅನ್ವೇಷಕನು ದೃಢನಿಶ್ಚಯ, ಆತ್ಮವಿಶ್ವಾಸ ಮತ್ತು ಸತ್ಯದ ಹಾದಿಯಲ್ಲಿ ನಡೆದಾಗ, ಯುಗಗಳ ಹರಿವು ಕೂಡ ಅವನ ಭಕ್ತಿಯ ಮುಂದೆ ತಲೆಬಾಗುತ್ತದೆ. ಸಾಗರ ಎಂಬ ಪದಗಳು ಅವರ ವ್ಯಕ್ತಿತ್ವದ ಸಾರವನ್ನು ಸಾಕಾರಗೊಳಿಸುತ್ತವೆ. ಶಾಂತಿಯು ಬಾಹ್ಯ ಸಂದರ್ಭಗಳಿಂದಲ್ಲ, ಆದರೆ ಸ್ವಯಂ ನಿಯಂತ್ರಣ ಮತ್ತು ವಿವೇಕಯುತ ನಡವಳಿಕೆ ಯಿಂದ ಉಂಟಾಗುತ್ತದೆ ಎಂದು ತೋರಿಸಿದರು.

ಸಾಗರದಂತೆ, ಅವರ ಹೃದಯವು ವಿಶಾಲವಾಗಿತ್ತು - ತನ್ನೊಳಗಿನ ಪ್ರತಿಯೊಬ್ಬರನ್ನು ಒಳಗೊಳ್ಳುತ್ತಿತ್ತು, ಎಲ್ಲರಿಗೂ ಯೋಗಕ್ಷೇಮದ ಮನೋಭಾವ ದಿಂದ ತುಂಬಿತ್ತುಟಟಿ ಎಂದು ಶ್ಲಾಘಿಸಿದರು.

**ಸನ್ಮಾನ ತೋರಿದ**

**ಶಾಂತಿಸಾಗರ ಮುನಿ**

ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮಾತನಾಡಿ, ಶ್ರವಣಬೆಳಗೊಳ ಭಾರತದ ಪ್ರಾಚೀನ ನಾಗರಿಕತೆಯ ಮುಕುಟಮಣಿಯಾಗಿದೆ. ಇಲ್ಲಿನ ಚಂದ್ರಗಿರಿಯಲ್ಲಿ 2000 ವರ್ಷಗಳ ಹಿಂದೆ ಮೌರ್ಯ ವಂಶದ ಸಂಸ್ಥಾಪಕ ಚಂದ್ರಗುಪ್ತ ಮೌರ್ಯ ಸಲ್ಲೇಖನ ವ್ರತದ ಮೂಲಕ ಜಿನಪಾದ ಸೇರಿದ ಇತಿಹಾಸವಿದೆ. ಇಂದು ಅನಾವರಣಗೊಂಡಿರುವ ಶಾಂತಿ ಸಾಗರ ಸ್ವಾಮೀಜಿಯ ವರ ಪ್ರತಿಮೆಯು ಮುಂದಿನ ಪೀಳಿಗೆಗೂ ಅವರು ಹಾಕಿ ಕೊಟ್ಟ ಸನ್ಮಾರ್ಗವನ್ನು ತೋರಿಸುವ ಸಂಕೇತವಾಗಿದೆ ಎಂದರು.

ಪರಮಪೂಜ್ಯ ತಪಶ್ಚರ್ಯಾ ಚಕ್ರವರ್ತಿ ಆಚಾರ್ಯ ಶ್ರೀ 108 ಸುವಿಧಿಸಾಗರ ಮಹಾರಾಜರು, ಪರಮಪೂಜ್ಯ ಸಂಯಮ ಮೂರ್ತಿ ಆಚಾರ್ಯ ಶ್ರೀ 108 ವರ್ಧಮಾನಸಾಗರ ಮಹಾರಾಜರು (ದಕ್ಷಿಣ), ಪ.ಪೂ. ನಿರ್ಯಾಪಕ ಶ್ರಮಣ ಮುನಿಶ್ರೀ 108 ಧರ್ಮಸಾಗರ, ಪ.ಪೂ. ನಿರ್ಯಾಪಕ ಶ್ರಮಣ ಮಹಾರಾಜರು ಮುನಿಶ್ರೀ 108 ವಿದ್ಯಾಸಾಗರ ಮಹಾರಾಜರು, ಪ.ಪೂ. ನಿರ್ಯಾಪಕ ಶ್ರಮಣ ಮುನಿಶ್ರೀ 108 ಸಿದ್ಧಾಂತಸಾಗರ ಮಹಾರಾಜರು ದಿವ್ಯ ಸಾನ್ನಿಧ್ಯ ವಹಿಸಿದ್ದರು.

ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ, ಯೋಜನೆ ಮತ್ತು ಸಾಂಖ್ಯಿಕ ಖಾತೆ ಸಚಿವ ಡಿ. ಸುಧಾಕರ್, ಸಂಸದ ಶ್ರೇಯಸ್ ಪಟೇಲ್, ಶಾಸಕ ಸಿ.ಎನ್. ಬಾಲಕೃಷ್ಣ, ಬೆಳಗಾವಿ ದಕ್ಷಿಣದ ಶಾಸಕ ಅಭಯ ಪಾಟೀಲ ಹಾಗೂ ಇತರರು ಇದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248